ಈ) ಉದ್ಭವಿಸುವುದಿಲ್ಲ.

**ವಿಷಯ : ಕುವೆಂಪು ವಿಶ್ವವಿದ್ಯಾಲಯಕ್ಕೆ ಹಣ ಬಿಡುಗಡೆ.**

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 194 (234)

ಶ್ರೀ. ಡಿ. ಬಿ. ಚಂದ್ರೇಗೌಡ (ತೀರ್ಥಹಳ್ಳಿ) :- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುವೆಂಪು ವಿಶ್ವವಿದ್ಯಾಲಯಕ್ಕೆ ಸಾಕಷ್ಟು ಪ್ರಮಾಣದಲ್ಲಿ ಸಂಶೋಧನೆ ಮತ್ತು ಇತರ ಬಾಬ್ತುಗಳಿಗೆ ಹಣ ಬಿಡುಗಡೆಯಾಗುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದರೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ.

ಶ್ರೀ. ಎಸ್. ಎಂ. ಯಾಹ್ಯ (ಉನ್ನತ ಶಿಕ್ಷಣ ಸಚಿವರು ) :-

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

**ದಿನಾಂಕ : 7.9.94 ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳು.**

**ವಿಷಯ : ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕೆಲವು ಹಳ್ಳಿಗಳಲ್ಲಿನ ಮೀನುಗಾರರಿಗೆ ಮನೆಗಳನ್ನು ಕಟ್ಟಿಸಿಕೊಡುವ ಬಗ್ಗೆ.**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 465 (777)

ಶ್ರೀ. ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ ):- ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕೆಂಗಾನೂರ್ ಹಾಗೂ ಸವದತ್ತಿ ತಾಲ್ಲೂಕಿನ ಮಾಟೊಳ್ಳಿ ಹಾಗೂ ಎಕ್ಕುಂಡಿ ಗ್ರಾಮಗಳಲ್ಲಿ ಮೀನುಗಾರರಿಗೆ ಮನೆಗಳನ್ನು ಕಟ್ಟಲು ಸರ್ಕಾರ ಜಿಲ್ಲಾ ಪರಿಷತ್ತಿಗೆ ಎಷ್ಟು ಹಣ ಬಿಡುಗಡೆ ಮಾಡಿದೆ.

ಆ) ಇದರಲ್ಲಿ ರಾಜ್ಯ ಸರ್ಕಾರದ ವಂತಿಗೆ ಎಷ್ಟು ಹಾಗೂ ಕೇಂದ್ರ ಸರ್ಕಾರದ ವಂತಿಗೆ ಎಷ್ಟು:

ಇ) ಇನ್ನು ಪೂರ್ಣ ಹಣ ಬಿಡುಗಡೆ ಮಾಡಿಲ್ಲದಿರುವುದು ನಿಜವೆ : ಹಾಗಿದ್ದಲ್ಲಿ ಉಳಿದ ಹಣ ಬಿಡುಗಡೆ ಮಾಡಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ ;

ಈ) ಮೀನುಗಾರರಿಗೆ ಮನೆಗಳು ಹಂಚಲು ಫಲಾನುಭವಿಗಳನ್ನು ಆರಿಸಲಾಗಿದೆಯೇ : (ಆರಿಸಲಾಗಿದ್ದಲ್ಲಿ ಅವರ ಹೆಸರನ್ನು ಒದಗಿಸುವುದು).